## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 483 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:24-07-2019.

## ಸುತ್ತೋಲೆ

ವಿಷಯ: ಗ್ರಾಮ ಪಂಚಾಯತಿಗಳು ಕೈಗಾರಿಕೆಗಳಿಗೆ ತೆರಿಗೆ ವಿಧಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 481 ಗ್ರಾಪಂಅ 2016, ದಿನಾಂಕ:27-02-2018.
2. ಸರ್ಕಾರದ ಇದೇ ಸಮಸಂಖ್ಯೆಯ ಸುತ್ತೋಲೆ ದಿ:25-05-2019.

*******

ಉಲ್ಲೇಖ (1) ರ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿಗಳು ಕೈಗಾರಿಕೆಗಳಿಗೆ ವಿಧಿಸುತ್ತಿರುವ ತೆರಿಗೆ ಹಾಗೂ ಫೀಜುಗಳು ಮತ್ತು ವಸೂಲಿ ಕ್ರಮದ ಬಗ್ಗೆ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಉಲ್ಲೇಖ (2) ರ ಸರ್ಕಾರದ ಸುತ್ತೋಲೆಯಲ್ಲಿ ಕೆ.ಐ.ಎ.ಡಿ.ಬಿ.ಯ ಎಲ್ಲಾ ಕೈಗಾರಿಕಾ ಪ್ರದೇಶಗಳಲ್ಲಿನ ಆಸ್ತಿ ತೆರಿಗೆಯನ್ನು ಆನ್ ಲೈನ್ ಸೇವೆ ಮುಖಾಂತರ ಕೆ.ಐ.ಎ.ಡಿ.ಬಿ.ಯು ವಸೂಲು ಮಾಡಿ, ತಕ್ಷಣವೇ ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಿಗೆ ಪಾವತಿ ಮಾಡಲು ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.

ಉಲ್ಲೇಖ (1) ರ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿಗಳು ಕೈಗಾರಿಕೆಗಳ ಕಟ್ಟಡಗಳಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 199 ಮತ್ತು ಅನುಸೂಚಿ-IV ರಲ್ಲಿ ನಿರ್ದಿಷ್ಟಪಡಿಸಿರುವ ಕನಿಷ್ಠ ದರವಾದ ಶೇ. 0.4 ರಿಂದ ಗರಿಷ್ಠ ಶೇ. 0.6 ರವರೆಗೆ ಮಾತ್ರ ವಿಧಿಸಿ ಕರ ನಿರ್ಧರಣೆ ಮಾಡಲು ತಿಳಿಸಲಾಗಿದೆ.

ರಾಜ್ಯದ ಕೆಲವು ಗ್ರಾಮ ಪಂಚಾಯತಿಗಳು ಕೈಗಾರಿಕಾ ಕಟ್ಟಡಗಳಿಗೆ ಮೇಲ್ಕಂಡಂತೆ ತೆರಿಗೆ ವಿಧಿಸದೆ ತಮ್ಮದೆ ಆದ ರೀತಿಯಲ್ಲಿ ತೆರಿಗೆ ನಿಗದಿಪಡಿಸಿಕೊಂಡು ವಸೂಲಿ ಮಾಡುತ್ತಿದ್ದು, ಕೈಗಾರಿಕೆಗಳಿಗೆ ತೊಂದರೆ ಉಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ವ್ಯವಹಾರ ಸರಳೀಕರಣಗೊಳಿಸುವ ನಿಟ್ಟಿನಲ್ಲಿ, ರಾಜ್ಯ ಸರ್ಕಾರದ ಕೈಗಾರಿಕಾ ಸ್ನೇಹಿ ನೀತಿಯನ್ನು ಉತ್ತೇಜಿಸುವ ಮತ್ತು ಗ್ರಾಮ ಪಂಚಾಯತಿಗಳು ತೆರಿಗೆ ವಿಧಿಸಲು ಏಕ ರೂಪತೆ ತಂದು ಗ್ರಾಮ ಪಂಚಾಯತಿಗಳ ತೆರಿಗೆ ವಿಧಿಸುವ, ವಸೂಲಿ ಮಾಡುವ ಪ್ರಕ್ರಿಯೆ ಸುಗಮವಾಗುವುದರ ಜೊತೆಗೆ ಸಂಪನ್ಮೂಲ ಸಂಗ್ರಹವು ಹೆಚ್ಚಲಿದೆ ಎಂದು ಸರ್ಕಾರವು ಭಾವಿಸಿದೆ.

ಗ್ರಾಮ ಪಂಚಾಯತಿಗಳು ಈ ಕೆಳಕಂಡಂತೆ ಕೈಗಾರಿಕೆಗಳ ಕಟ್ಟಡಗಳಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 199 ಮತ್ತು ಅನುಸೂಚಿ-IV ರಲ್ಲಿ ನಿರ್ದಿಷ್ಟಪಡಿಸಿರುವ ಕನಿಷ್ಠ ದರವಾದ ಶೇ.0.4 ರಿಂದ ಗರಿಷ್ಠ 0.6 ರವರೆಗೆ ಮಾತ್ರ ವಿಧಿಸಿ ತೆರಿಗೆ ನಿರ್ಧರಣೆ ಮಾಡಲು ಸೂಚಿಸಿದೆ.

| ಕ್ರ.ಸಂ. | ಕೈಗಾರಿಕೆಗಳ ವರ್ಗ | ವಿಧಿಸಬಹುದಾದ ತೆರಿಗೆ ಪ್ರಮಾಣ |
|---|---|---|
| 1 | ಅತಿ ಸಣ್ಣ ಕೈಗಾರಿಕೆ ಅಥವಾ ಇತರ ಅತಿ ಸಣ್ಣ ಘಟಕಗಳಿಗೆ ಮತ್ತು ಸಣ್ಣ ಕೈಗಾರಿಕೆ ಅಥವಾ ಇತರ ಸಣ್ಣ ಘಟಕಗಳಿಗೆ | ಶೇ. 0.4 |
| 2 | ಮಧ್ಯಮ ಕೈಗಾರಿಕೆ ಅಥವಾ ಮಧ್ಯಮ ಘಟಕಗಳಿಗೆ | ಶೇ. 0.5 |
| 3 | ಭಾರಿ ಕೈಗಾರಿಕೆ ಅಥವಾ ಭಾರಿ ಘಟಕಗಳಿಗೆ | ಶೇ. 0.6 |

ಮುಂದುವರೆದು, ಖಾಲಿ ಇರುವ ಜಾಗದಲ್ಲಿ ಕೈಗಾರಿಕಾ ಉದ್ದೇಶಕ್ಕಾಗಿ ಬಳಸುವ ಭಾಗಕ್ಕೆ 0.05% ವಿಧಿಸುವುದು. ಉಳಿದಂತೆ ಉಪಯೋಗಿಸದೆ ಇರುವ ಖಾಲಿ ಜಾಗಕ್ಕೆ ಶೇ.0.02 ವಿಧಿಸುವುದು. ರಸ್ತೆಗಾಗಿ, ಅಲಂಕಾರಿಕ ಉದ್ಯಾನವನಕ್ಕಾಗಿ/ ಪರಿಸರ ಸಂರಕ್ಷಣೆಗಾಗಿ /ಹಸುರೀಕರಣಕ್ಕಾಗಿ ಉಳಿಸಿರುವ ಜಾಗಕ್ಕೆ ತೆರಿಗೆ ವಿಧಿಸಬಾರದೆಂದೂ ಸಹ ತಿಳಿಸಿದೆ.

24.07.2019

(ಎಲ್.ಕೆ. ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

24/7

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ. ವಿಕಾಸ ಸೌಧ, ಬೆಂಗಳೂರು.
3) ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ. ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
4) ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಎಸ್.ಐ.ಡಿ.ಸಿ. ರಾಜಾಜಿನಗರ, ಕೈಗಾರಿಕಾ ವಸಹಾತು ವೆಸ್ಟ್ ಆಫ್ ಕಾರ್ಡ್ ರಸ್ತೆ, ಬೆಂಗಳೂರು.
5) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
6) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ.
7) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.